(7)

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ರವರ**
**<u>ನಿಯಮ 72ರ ಗಮನ ಸೆಳೆಯುವ ಸೂಚನೆಗೆ ಉತ್ತರ</u>**

**ಪ್ರಶ್ನೆ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 2025 ಮೇ ಮತ್ತು ಜೂನ್‌ನಲ್ಲಿ ನಡೆದ ಕೋಮುಗಲಭೆ ಪ್ರಕರಣದಲ್ಲಿ ಮೃತಪಟ್ಟ ಮತ್ತು ಗಾಯಗೊಂಡ ಅಮಾಯಕರಿಗೆ ಸರ್ಕಾರದಿಂದ ಪರಿಹಾರಧನ ನೀಡುವ ಬಗ್ಗೆ ಮತ್ತು ಕೋಮುಗಲಭೆ ನಡೆಯದಂತೆ ಇಲಾಖೆ ಕೈಗೊಂಡ ಕ್ರಮಗಳ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು, ಅಕ್ರಮ ಚಟುವಟಿಕೆಗೆ ಕಡಿವಾಣ ಹಾಕುವ ಕುರಿತು.

**ಉತ್ತರ:** ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯಲ್ಲಿ ದಿನಾಂಕ: 27.05.2025 ರಂದು ಮಧ್ಯಾಹ್ನ 3.00 ಗಂಟೆಯಿಂದ 3.30 ಗಂಟೆಯ ಮಧ್ಯಾವಧಿಯಲ್ಲಿ ಅಬ್ದುಲ್ ರಹಿಮಾನ್ ಮತ್ತು ಕಲಂದರ್ ಶಾಫಿ ರವರು ಪಿಕ್ ಅಪ್ ವಾಹನ ನಂ: ಕೆಎ 19 ಎಇ 1477 ರಲ್ಲಿ ಮರಳು ಲೋಡ್ ಮಾಡಿ ಕುರಿಯಾಳ ಗ್ರಾಮದ ಈರಾಕೋಡಿ ಬಳಿ ಇಳಿಸುವ ಸಮಯ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಅಬ್ದುಲ್ ರಹಿಮಾನ್ ಮತ್ತು ಕಲಂದರ್ ಶಾಫಿ ಮೇಲೆ ಹಲ್ಲೆ ನಡೆಸಿದ್ದು, ತೀವ್ರ ಗಾಯಗೊಂಡ ಅಬ್ದುಲ್ ರಹಿಮಾನ್ ರವರು ಸ್ಥಳದಲ್ಲಿಯೇ ಮೃತ ಪಟ್ಟಿರುತ್ತಾರೆ. ಈ ಸಂಬಂಧ ಬಂಟ್ವಾಳ ಗ್ರಾಮಾಂತರ ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ:54/2025 ಕಲಂ: 191[1], 191[2], 191[3], 118[1]. 118 [2], 109, 103 ಜೊತೆಗೆ 190 ಬಿಎನ್‌ಎಸ್ 2023ರ ರೀತ್ಯಾ ಪ್ರಕರಣ ದಾಖಲಾಗಿರುತ್ತದೆ. ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು 12 ಜನ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ. ಇತರ ಆರೋಪಿಗಳ ಪತ್ತೆ ಕಾರ್ಯ ಮುಂದುವರೆದಿದ್ದು, ಪ್ರಕರಣ ತನಿಖೆಯಲ್ಲಿರುತ್ತದೆ.

ಮಂಗಳೂರು ನಗರದಲ್ಲಿ ದಿನಾಂಕ:01.05.2025 ರಂದು ಬಜಪೆ ಪೊಲೀಸ್ ಠಾಣಾ ಸರಹದ್ದಿನಲ್ಲಿ ಹಿಂದೂ ಸಮುದಾಯದ ಸುಹಾಸ್ ಶೆಟ್ಟಿ ಎಂಬಾತನನ್ನು ಅನ್ಯ ಕೋಮಿನ ದುಷ್ಕರ್ಮಿಗಳು ಈ ಹಿಂದೆ ನಡೆದ ಕೋಮು ದ್ವೇಷದ ಕೊಲೆ ಹಿನ್ನೆಲೆಯಲ್ಲಿ ಉದ್ದೇಶಪೂರ್ವಕವಾಗಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಿರುತ್ತಾರೆ. ಈ ಸಂಬಂಧ ಬಜಪೆ ಪೊಲೀಸ್ ಠಾಣೆ ಮೊಕದ್ದಮೆ ಸಂಖ್ಯೆ: 80/2025 U/s 189 (4), 191 (2), 191 (3), 126 (2), 109, 118 (1), 103 (1), 61(1), 62, 351 (2), 351(3), 190 BNS 2023 & 3(1), 25 Arms Act ರಂತೆ ಪ್ರಕರಣ ದಾಖಲಾಗಿದ್ದು ಒಟ್ಟು 11 ಜನ ಆರೋಪಿಗಳನ್ನು ದಸ್ತಗಿರಿ ಮಾಡಲಾಗಿರುತ್ತದೆ. ಸದರಿ ಪ್ರಕರಣಗಳಲ್ಲಿ ಮೃತ/ ಗಾಯಗೊಂಡ ಕುಟುಂಬಗಳಿಗೆ ಜಿಲ್ಲಾಡಳಿತದ ವತಿಯಿಂದ ಪರಿಹಾರ ನೀಡಿರುವುದಿಲ್ಲ.

**ಕೋಮು ಗಲಭೆ ನಡೆಯದಂತೆ ಕೈಗೊಂಡಿರುವ ಕ್ರಮಗಳ ವಿವರ:**

1. ರಾಜ್ಯದಲ್ಲಿ ಕೋಮುಗಲಭೆಗಳನ್ನು ನಿಯಂತ್ರಿಸಲು ಹೊಸದಾಗಿ ವಿಶೇಷ ಕಾರ್ಯಪಡೆಯನ್ನು ಸ್ಥಾಪಿಸಲಾಗಿದೆ.
2. ಸಮಾಜಘಾತಕ ವ್ಯಕ್ತಿಗಳ ಕಾನೂನುಬಾಹಿರ ಚಟುವಟಿಕೆಗಳನ್ನು ಹತ್ತಿಕ್ಕಲು ಸರ್ಕಾರದ ನಿಬಂಧನೆಗಳ ಮೇರೆಗೆ ಕಠಿಣ ಕಾನೂನು ಕ್ರಮಗಳನ್ನು ತೆಗೆದುಕೊಂಡು ಸಂಘಟಿತ ವ್ಯಕ್ತಿಗಳ ಕಾರ್ಯಚಟುವಟಿಕೆಗಳನ್ನು ನಿಯಂತ್ರಿಸಲಾಗುತ್ತಿದೆ. **ಉದಾ:-** ಬಿ.ಎನ್.ಎಸ್.ಎಸ್ ರನ್ವಯ ಭದ್ರತಾ ಕಾಯ್ದೆಯಡಿ, "Goonda Act" (The Karnataka Prevention of Dangerous Activities of Bootleggers, Drug-Offenders, Gamblers, Goondas, [Immoral Traffic Offenders, Slum-Grabbers and Video or Audio Pirates] Act, 1985) Kcoca (The Karnataka Control of Organised Crime Act 2000) ರನ್ವಯ ಸಂಘಟಿತ ಅಪರಾಧಗಳಲ್ಲಿ ತೊಡಗುವವರ ಮೇಲೆ ನಿಗಾ ಇರಿಸಲಾಗುತ್ತಿದೆ.

Scanned with OKEN Scanner

3. ಸಾಮಾಜಿಕ ಜಾಲತಾಣಗಳಲ್ಲಿ ಪ್ರಚೋದನಕಾರಿ ಪೋಸ್ಟ್ ಮಾಡುವವರ ವಿರುದ್ಧ ಪ್ರಕರಣವನ್ನು ದಾಖಲಿಸಲಾಗುತ್ತಿದೆ.
4. ಸಮಾಜದಲ್ಲಿ ಅಶಾಂತಿ ಸೃಷ್ಟಿಸುವ, ಕಾನೂನು ಸುವ್ಯವಸ್ಥೆಗೆ ಭಂಗ ತರುವಂತಹ ಕಿಡಿಗೇಡಿಗಳನ್ನು ಗಡಿಪಾರು ಮಾಡುವ ಬಗ್ಗೆ, ಕಟ್ಟುನಿಟ್ಟಿನ ಕಾನೂನು ರೀತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
5. ದ್ವೇಷ ಭಾಷಣ ಮಾಡುವವರ ವಿರುದ್ಧ ಪ್ರಕರಣವನ್ನು ದಾಖಲಿಸಲಾಗುತ್ತಿದ್ದು, ಸದರಿಯವರ ಮೇಲೆ ಸದ್ವರ್ತನೆಗಾಗಿ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆಯ ಅನ್ವಯ ಮುಂಜಾಗ್ರತಾ ಕ್ರಮದ ವರದಿಗಳನ್ನು ತಯಾರಿಸಿ ಸಂಬಂಧಪಟ್ಟ ತಾಲ್ಲೂಕು ದಂಡಾಧಿಕಾರಿಗಳಿಗೆ ಸಲ್ಲಿಸಿ, ಮುಚ್ಚಳಿಕೆಯನ್ನು ಪಡೆದುಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.
6. ರೌಡಿ ಶೀಟರ್‌ಗಳ ಚಲನವಲನಗಳ ಮೇಲೆ ಸೂಕ್ತ ನಿಗಾ ಇರಿಸಿ, ಅವರನ್ನು ಹದ್ದುಬಸ್ತಿನಲ್ಲಿಡಲು ಭದ್ರತಾ ಕಾಯ್ದೆಯಡಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.
7. ಕೋಮು ಗಲಭೆ ಮತ್ತು ಕೋಮು ಸಂಘರ್ಷಗಳಂತಹ ಸನ್ನಿವೇಶಗಳನ್ನು ತಡೆಗಟ್ಟಲು ಸರ್ಕಾರದಿಂದ ವಿಶೇಷ ಕಾರ್ಯಪಡೆಯನ್ನು (Special Action Force) ಸ್ಥಾಪನೆ ಮಾಡಲಾಗಿರುತ್ತದೆ. ಕೋಮು ಸೂಕ್ಷ್ಮ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ವಿಶೇಷ ಕಾರ್ಯಪಡೆಗಳಿಂದ ಪಥಸಂಚಲನವನ್ನು ತೀವ್ರಗೊಳಿಸಿ ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಸ್ಥಾಪನೆಯಾಗಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
8. ಸಭೆ-ಸಮಾರಂಭ ನಡೆಸುವ ಆಯೋಜಕರಿಗೆ, ಕಾರ್ಯಕ್ರಮದಲ್ಲಿ ಭಾಗವಹಿಸುವ ಮುಖಂಡರ ಮಾಹಿತಿ, ಸೇರುವ ಜನರ ಮಾಹಿತಿ, ಭಾಷಣ ಮಾಡುವವರ ಮಾಹಿತಿಯನ್ನು ಮುಂಗಡವಾಗಿ ಪಡೆದು, ಆಯೋಜಕರಿಗೆ ಪ್ರಚೋದನಕಾರಿ ಹೇಳಿಕೆ/ಭಾಷಣ ಮಾಡಿದ್ದಲ್ಲಿ ಆಯೋಜಕರ ಮೇಲೆ ಮತ್ತು ಭಾಷಣ ಮಾಡಿದವರ ಮೇಲೆ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದೆಂದು ಸೂಚಿಸಲಾಗುತ್ತಿದೆ.
9. ಠಾಣಾ ಮಟ್ಟದಲ್ಲಿ ಸೋಶಿಯಲ್ ಮೀಡಿಯಾ ಮಾನಿಟರಿಂಗ್ ಸೆಲ್ ಅನ್ನು ತೆರೆದು ಸಾಮಾಜಿಕ ಜಾಲತಾಣಗಳ ಮೇಲೆ ನಿಗಾ ವಹಿಸಲಾಗುತ್ತಿದ್ದು, ಕಾನೂನು ಸುವ್ಯಸ್ಥೆಗೆ ಧಕ್ಕೆ ತರಬಹುದಾದ ಸುಳ್ಳು ಸುದ್ದಿಗಳು, ಪ್ರಚೋದನಕಾರಿ ಸಂದೇಶಗಳು/ ಪೋಸ್ಟ್‌ಗಳು ಹಾಗೂ ವಿಡಿಯೋಗಳನ್ನು ಬಿತ್ತರಿಸುವವರ ವಿರುದ್ಧ ಪ್ರಕರಣವನ್ನು ದಾಖಲಿಸಿ, ಆರೋಪಿಗಳನ್ನು ಪತ್ತೆ ಹಚ್ಚಿ ದಸ್ತಗಿರಿ ಮಾಡಲಾಗುತ್ತಿದೆ.

---

ಹೆಚ್‌ಡಿ 314 ಪಿಸಿಇ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

Scanned with OKEN Scanner